117

ಮೈಸೂರ ಗೆಜಿಟ.

ಸಂ. XXXI. ಸರ್ಕಾರದಿಂದ ಪ್ರಾಯಿಷ್ ಆದ್ದು. [ನಂ. 35.

ಬೆಂಗಳೂರು, ಗುರುವಾರ, ಸೆಪ್ಟಂಬರ್ ತಾ॥ 3, ಸ॥ 1896.

IIನೇ ಭಾಗ.

ಇಂಡ್ಯಾಗವರ್ನ್‌ಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್‌ರು ವಗೈರೆ ರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ವಿದ್ಯಾಭ್ಯಾಸದ ಇಲಾಖೆ.

ಪ್ರಕಟನ ಪತ್ರಿಕೆ.

ಮೈಸೂರು ದೇಶೀ ಪರೀಕ್ಷೆಗಳು.

ಸ॥ 1896ನೇ ಇಸವಿ ಆಗಸ್ಟು ತಾರೀಖು 6.

(i) ಸ॥ 1897ನೇ ಇಸವಿ ಡಿಸೆಂಬರು ತಿಂಗಳು ಮೊದಲುಗೊಂಡು ಮೈಸೂರು ಲೋವರ್ ಸೆಕಂಡರೀ ಪರೀಕ್ಷಾ ದೇಶಭಾಷಾ ಪರೀಕ್ಷೆಗೆ ಪ್ರವೇಶಧನವು (2—8—0) ರೂಪಾಯಿಗಳಿಗೆ ಬದಲಾಗಿ (3—0—0) ರೂಪಾಯಿಗಳಂತೆ ನಿಯಮಿಸಲ್ಪಟ್ಟಿರುತ್ತೆ.

(ii) ಸ॥ 1897ನೇ ಇಸವಿ ಡಿಸೆಂಬರು ತಿಂಗಳು ಮೊದಲುಗೊಂಡು ಮೈಸೂರು ಕರ್ಣಾಟಕ ಪಂಡಿತ ಪರೀಕ್ಷೆಗೆ ಕರ್ಣಾಟಕ ವಚನಕಾವ್ಯವು ಪೂರ್ತಿಯಾಗಿ ನಿಯಮಿಸಲ್ಪಟ್ಟಿರುತ್ತೆ.

ಮೈಸೂರು ಲೋವರ್ ಸೆಕಂಡರೀ ಪರೀಕ್ಷೆ.

ಸ॥ 1896ನೇ ಇಸವಿ ಆಗಸ್ಟು ತಾರೀಖು 14.

ಸಿ. ಬ್ಯಸ್ಸ; ಸಿ. ಕೆ. ಸುಬ್ಬರಾವು ಇವರುಗಳಿಂದ ರಚಿತವಾದ ವ್ಯವಸಾಯ ಶಾಸ್ತ್ರದ ಪ್ರಥಮ ಪುಸ್ತಕವು ತತ್ಕಾಲದಲ್ಲಿ ಛಾಪಿಸಲ್ಪಡುವದಿಲ್ಲವಾದ್ದರಿಂದ ಇತಃಪರ ಮತ್ತೊಂದು ಅಪ್ಪಣೆ ಕೊಡುವ ವರವಿಗೂ ಹಾರ್ಮ್ಯಾ ಸಾಹೇಬರವರಿಂದ ರಚಿಸಲ್ಪಟ್ಟ ಕನ್ನಡ ವ್ಯವಸಾಯ ಪ್ರಥಮ ಬೋಧಿನಿ ಎಂಬ ಪುಸ್ತಕವು ವ್ಯವಸಾಯ ಶಾಸ್ತ್ರಕ್ಕಾಗಿ ಮೈಸೂರು ಲೋವರ್ ಸೆಕಂಡರೀ ಪರೀಕ್ಷೆಗೆ ನಿಯಮಿಸಲ್ಪಟ್ಟಿರುತ್ತೆ.

ಎಚ್. ಜೆ. ಛಾಛ್ಮ,
ಇನ್‌ಸ್ಪೆಕ್ಟರ್ ಜನರಲ್ ಆಫ್ ಎಜ್ಯುಕೇಷನ್.

ಇನಾಂ ಇಲಾಖೆ.

ಇಸ್ತಿಹಾರ್‌ನಾಮೆ.

ತಾರೀಖು 18ನೇ ಆಗಸ್ಟು 1896.

ನಂಬರು 1. ಇನಾಂದಾರರಿಗೆ ಇದರಿಂದ ತಿಳಿಯಪಡಿಸುವದೇನಂದರೆ,—ನಾಗಮಂಗಲ ತಾಲ್ಲೂಕಿನಲ್ಲಿ ಯಿರತಕ್ಕ ಚಿಲ್ಲರೆ ಇನಾಂಗಳ ಬಾಬತು (729) ಫೈನಲ್ ಟೈಟಲ್‌ಡೀಡ್ ಯಾನೆ ಕಾಯಂ ಪಟ್ಟೆಗಳು ಮೈಸೂರು ಡಿಸ್ಟ್ರಿಕ್ಟ್ ಡೆಪ್ಯುಟಿ ಕಮಿಷನರವರ ಬಳಿಗೆ ಬಟವಾಡೆ ಬಗ್ಗೆ ಈ ತಾರೀಖಿನಲ್ಲಿ ಕಳುಹಿಸಲ್ಪಟ್ಟವು.